ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮಂಜುನಾಥ ಭಂಡಾರಿ ಇವರು ನಿಯಮ 72 ರಡಿ ಮಂಡಿಸಿರುವ ಸೂಚನೆಗೆ ಸರ್ಕಾರದ ಹೇಳಿಕೆ:

ಸೂಚನೆ:-

ರಾಜ್ಯದಲ್ಲಿ ಒಟ್ಟು 30781 ಕಂದಾಯ ಗ್ರಾಮಗಳಿದ್ದು, ಇವುಗಳಲ್ಲಿ 2500 ಜನವಸತಿಯಿಲ್ಲದ ಹಾಗೂ 28,281 ಜನವಸತಿಯಿರುವ ಗ್ರಾಮಗಳಾಗಿವೆ. ಕಂದಾಯ ಇಲಾಖೆಯ ಇತ್ತೀಚಿನ ದಾಖಲೆಗಳ ಪ್ರಕಾರ ರಾಜ್ಯದ ಜನವಸತಿಯಿರುವ 28,276 ಗ್ರಾಮಗಳಿಗೆ ಸ್ಮಶಾನ ಭೂಮಿ ಒದಗಿಸಲಾಗಿದೆ. ಸರ್ಕಾರಿ ಜಮೀನು ಲಭ್ಯವಿಲ್ಲದ ಕಾರಣ ಉಡುಪಿಯ 2 ಹಾಗೂ ರಾಯಚೂರಿನ 3 ಗ್ರಾಮಗಳಿಗೆ ಸ್ಮಶಾನ ಭೂಮಿ ಒದಗಿಸಲಾಗಿಸಲು ಖಾಸಗಿಯವರ ಭೂಮಿಯನ್ನು ಗುರುತಿಸಲಾಗಿರುತ್ತದೆ.

ಇತ್ತೀಚೆಗೆ ಪತ್ರಿಕೆಯಲ್ಲಿ ಪ್ರಕಟವಾದ ವರದಿಯಂತೆ ಕಂದಾಯ ಇಲಾಖೆಯು 16 ಜಿಲ್ಲೆಗಳ 606 ಗ್ರಾಮಗಳಿಗೆ ಸಂಬಂಧಿಸಿದ ಸ್ಮಶಾನ ಭೂಮಿಯನ್ನು ಹೊರತುಪಡಿಸಿ ಉಳಿದಂತೆ ಸ್ಮಶಾನ ಭೂಮಿಯನ್ನು ಸಂಬಂಧಿಸಿದ ಸ್ಥಳೀಯ ಸಂಸ್ಥೆಗೆ ಹಸ್ತಾಂತರಿಸಲಾಗಿದೆ. ಆದರೆ ವಾಸ್ತವವಾಗಿ ಈಗಾಗಲೇ ಸ್ಥಳೀಯ ಸಂಸ್ಥೆಗೆ ಹಸ್ತಾಂತರಿಸಲಾಗಿರುವ ಸ್ಮಶಾನ ಭೂಮಿಗಳಲ್ಲಿ ಕೆಲವು ಖಾಸಗೀಯವರಿಂದ ಅತಿಕ್ರಮಣವಾಗಿವೆ. ಸ್ಮಶಾನ ಅತಿಕ್ರಮಣ ತೆರವುಗೊಳಿಸದೇ ಹಾಗೂ ಗಡಿಯನ್ನು ಅಳತೆ ಮಾಡಿ ಗುರುತಿಸದೇ ಹಾಗೆಯೇ ಕೇವಲ ದಾಖಲೆಯಲ್ಲಿ ಹಸ್ತಾಂತರ ಪ್ರಕ್ರಿಯೆ ನಡೆಸಲಾಗಿದೆ. ಎಂಬ ಆರೋಪಗಳಿವೆ. ಇದರಿಂದ ಸ್ಥಳೀಯ ಸಂಸ್ಥೆಗೆ ಸ್ಮಶಾನ ಭೂಮಿಯನ್ನು ಗುರುತಿಸಿ ಅಭಿವೃದ್ಧಿಪಡಿಸಲು ಅಸಾಧ್ಯವಾಗಿದೆ.

ಆದ್ದರಿಂದ ಗ್ರಾಮೀಣ ಭಾಗದಲ್ಲಿ ಕಂದಾಯ, ಭೂಮಾಪನ ಹಾಗೂ ಪೊಲೀಸ್ ಇಲಾಖೆಯ ಜಂಟಿ ತಂಡವನ್ನು ರಚಿಸಿ ಸ್ಮಶಾನ ಭೂಮಿಗಳ ಗಡಿ ಗುರುತಿಸಿ, ಒತ್ತುವರಿಯಾಗಿದ್ದಲ್ಲಿ ಕಾನೂನು ಪ್ರಕಾರ ತೆರವು ಕಾರ್ಯಚರಣೆ ನಡೆಸಿ ತದನಂತರ ಗ್ರಾಮೀಣ ಸ್ಥಳೀಯ ಸರ್ಕಾರಗಳಿಗೆ ಹಸ್ತಾಂತರಿಸಿದಲ್ಲಿ, ಸ್ಥಳೀಯ ಸಂಸ್ಥೆಗಳು ಅವುಗಳನ್ನು ಜನಹಿತಕ್ಕೆ ಅಭಿವೃದ್ಧಿಪಡಿಸಲು ಸಹಕಾರಿಯಾಗುತ್ತದೆ ಎಂಬ ವಿಷಯದಲ್ಲಿ ಮಾನ್ಯ ಕಂದಾಯ ಇಲಾಖೆ ಮಂತ್ರಿಗಳ ಗಮನ ಸೆಳೆಯುತ್ತೇನೆ.

ಹೇಳಿಕೆ:-

ರಾಜ್ಯದ ಪ್ರತಿಯೊಂದು ಗ್ರಾಮದಲ್ಲಿಯೂ ಸಾರ್ವಜನಿಕ ಸ್ಮಶಾನ ಭೂಮಿ ಸೌಲಭ್ಯ ಕಲ್ಪಿಸಲು ಸರ್ಕಾರಿ ಜಮೀನು ಲಭ್ಯವಿದ್ದ ಕಡೆ ಕಾಯ್ದಿರಿಸಲು ಕರ್ನಾಟಕ ಭೂ ಕಂದಾಯ ಅಧಿನಿಯಮ, 1964 ರಡಿ ಜಿಲ್ಲಾಧಿಕಾರಿಗಳಿಗೆ ಅಧಿಕಾರವಿರುತ್ತದೆ.

ಸರ್ಕಾರಿ ಜಮೀನು ಲಭ್ಯವಿಲ್ಲದ ಕಡೆ ಅಗತ್ಯವಾದ ಖಾಸಗಿ ಜಮೀನನ್ನು ಕರ್ನಾಟಕ ಭೂಸ್ವಾಧೀನ ಕಾಯ್ದೆ, 1994 ರನ್ವಯ ಸ್ವಾಧೀನಪಡಿಸಿಕೊಳ್ಳಲು ಸಾಕಷ್ಟು ಕಾಲಾವಕಾಶ ಬೇಕಾಗಿರುವುದರಿಂದ ಆಶ್ರಯ ಹಾಗೂ ಇತರೆ ಯೋಜನೆಗಳಲ್ಲಿ ಅನುಸರಿಸುತ್ತಿರುವಂತೆ ಖಾಸಗಿಯವರಿಂದ ಜಮೀನನ್ನು ನೇರವಾಗಿ ಖರೀದಿಸಿ ಸ್ಮಶಾನದ ಉದ್ದೇಶಕ್ಕೆ ಕಾಯ್ದಿರಿಸಲು ಪ್ರಸ್ತಾಪಿಸಲಾಗಿತ್ತು. ಆ ಪ್ರಕಾರ 'ಸಾರ್ವಜನಿಕ ಸ್ಮಶಾನ ಭೂಮಿ' ಹೆಸರಿನಲ್ಲಿ ಖಾಸಗಿಯವರಿಂದ ಜಮೀನು ಖರೀದಿಸಲು ಯೋಜನೆಯನ್ನು ರೂಪಿಸಲಾಗಿದೆ. ಸ್ಮಶಾನ ಒದಗಿಸುವ ಬಗ್ಗೆ ಹೊರಡಿಸಲಾದ ಸುತ್ತೋಲೆ / ಸರ್ಕಾರಿ ಆದೇಶಗಳು ಈ ಕೆಳಗಿನಂತಿದೆ

ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್ ಡಿ 149 ಎಲ್‌ಜಿಪಿ 2014, ದಿನಾಂಕ:11-09-2014 ರಲ್ಲಿ ರುದ್ರಭೂಮಿಗಾಗಿ ಕಾಯ್ದಿರಿಸಬೇಕಾದ ಜಮೀನಿನ ವಿಸ್ತೀರ್ಣವನ್ನು ವೈಜ್ಞಾನಿಕವಾಗಿ ಲೆಕ್ಕ ಹಾಕಿ ಆ ಪ್ರಕಾರ 2000- 2001ನೇ ಸಾಲಿನ ಅಂಕಿ ಅಂಶಗಳಂತೆ

ರಾಜ್ಯದಲ್ಲಿ ಪ್ರತಿ ವರ್ಷ 1000 ಜನರಲ್ಲಿ ಸರಾಸರಿ 7-8 ಜನರು ಸಾವನ್ನಪ್ಪುತ್ತಾರೆ ಎಂದು ಭಾವಿಸಿದಲ್ಲಿ, ಮುಂದಿನ 30 ವರ್ಷಗಳಲ್ಲಿ ಸಾವನ್ನಪ್ಪಲಿರುವ ಜನಸಂಖ್ಯೆಯನ್ನು ಆಧರಿಸಿ ಶವಸಂಸ್ಕಾರಕ್ಕಾಗಿ ತಲಾ 60 ಚದರಡಿಯಂತೆ ಕನಿಷ್ಠ 18 ಸಾವಿರ ಚದರಡಿ (18 ರಿಂದ 20 ಗುಂಟೆ) ಕ್ಷೇತ್ರವನ್ನು ಸ್ಮಶಾನದ ಉದ್ದೇಶಕ್ಕಾಗಿ ಕಾಯ್ದಿರಿಸಲು 2002 ರಲ್ಲಿ ಹೊರಡಿಸಲಾದ ಸುತ್ತೋಲೆಯಲ್ಲಿ ತಿಳಿಸಲಾಗಿರುವುದನ್ನು ವಿವರಿಸುತ್ತಾ, ಗ್ರಾಮಾಂತರ ಪ್ರದೇಶದಲ್ಲಿ ಗ್ರಾಮ ಪಂಚಾಯಿತಿ/ತಾಲ್ಲೂಕು ಪಂಚಾಯಿತಿ ಜಿಲ್ಲಾ ಪಂಚಾಯಿತಿ ಇವರುಗಳ ಸಹಾಯದಿಂದ ಕಡ್ಡಾಯವಾಗಿ ಸ್ಮಶಾನ ಜಮೀನುಗಳಲ್ಲಿ ಆವಶ್ಯಕ ಮೂಲಭೂತ ಸೌಕರ್ಯ ಒದಗಿಸುವಂತೆ ಸೂಚನೆ ನೀಡಲಾಗಿದೆ

ಸರ್ಕಾರದ ಸುತ್ತೋಲೆ ಸಂಖ್ಯೆ ಆರ್.ಡಿ.273 ಎಲ್.ಜಿ.ಎಕ್ಸ್ 2020 ದಿನಾಂಕ 24.11.2021 ರಲ್ಲಿ ಜಿಲ್ಲಾಧಿಕಾರಿಗಳಿಗೆ ರಾಜ್ಯದಲ್ಲಿನ ನಗರ ಮತ್ತು ಗ್ರಾಮಗಳಿಗೆ ಸ್ಮಶಾನ ಭೂಮಿ ಒದಗಿಸುವ ಸಂಬಂಧ ಈ ಕೆಳಕಂಡಂತೆ ನಿರ್ದೇಶನಗಳನ್ನು ನೀಡಲಾಗಿದೆ.

1. ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 71ರಡಿ ಪ್ರದತ್ತವಾದ ಅಧಿಕಾರದನ್ವಯ ಜಿಲ್ಲಾಧಿಕಾರಿಗಳು ರಾಜ್ಯದಲ್ಲಿ ಸರ್ಕಾರಿ ಜಮೀನು ಲಭ್ಯವಿರುವ ಕಡೆ ವಿವಿಧ ಸಾರ್ವಜನಿಕ ಉದ್ದೇಶಗಳಿಗಾಗಿ ಅಗತ್ಯ ಜಮೀನನ್ನು ಕಾಯ್ದಿರಿಸಲು ಅವಕಾಶ ಕಲ್ಪಿಸಲಾಗಿರುವಂತೆ, ಆದ್ಯತೆಯ ಮೇರೆಗೆ ಸ್ಮಶಾನದ ಉದ್ದೇಶಕ್ಕಾಗಿ ಜಮೀನು ಕಾಯ್ದಿರಿಸಲು ಕ್ರಮ ಕೈಗೊಳ್ಳತಕ್ಕದ್ದು.
2. ಗೋಮಾಳ ಜಮೀನನ್ನು ಸ್ಮಶಾನಕ್ಕಾಗಿ ಮೀಸಲಿಡಲು ಕರ್ನಾಟಕ ಭೂ ಕಂದಾಯ ನಿಯಮಗಳು, 1966ರ ನಿಯಮ 97(4)(iii) ರಲ್ಲಿ ಜಿಲ್ಲಾಧಿಕಾರಿಯವರಿಗೆ ಅವಕಾಶ ಕಲ್ಪಿಸಲಾಗಿದೆ. ಅದರಂತೆ ಗೋಮಾಳ ಜಮೀನನ್ನು ಸ್ಮಶಾನಕ್ಕಾಗಿ ಕಾಯ್ದಿರಿಸಲು ಜಿಲ್ಲಾಧಿಕಾರಿಯವರ ಹಂತದಲ್ಲಿಯೇ ಕ್ರಮವಹಿಸತಕ್ಕದ್ದು.
3. ಸರ್ಕಾರಿ ಜಮೀನು 'ಬ' ಖರಾಬು ಎಂದು ವರ್ಗೀಕೃತವಾಗಿದ್ದಲ್ಲಿ, ಸ್ಮಶಾನದ ಉದ್ದೇಶವು ಸಾರ್ವಜನಿಕ ಉದ್ದೇಶವಾಗಿರುವುದರಿಂದ ಅಂತಹ ಜಮೀನುಗಳನ್ನು ಸಹ ಜಿಲ್ಲಾಧಿಕಾರಿಯವರ ಹಂತದಲ್ಲಿಯೇ ಕರ್ನಾಟಕ ಭೂ ಕಂದಾಯ ಕಾಯ್ದೆ, 1964ರ ಕಲಂ 71ರನ್ವಯ ಕಾಯ್ದಿರಿಸಲು ಕ್ರಮ ತೆಗೆದುಕೊಳ್ಳತಕ್ಕದ್ದು.

ಪರಂತು, ಕೆರೆ, ಕಟ್ಟೆ, ಕುಂಟೆ, ಹಳ್ಳ, ಸರೋವರ ಮತ್ತು ಇನ್ನಿತರೆ ಜಲಕಾಯ/ಜಲಮೂಲಗಳೆಂದು ವರ್ಗೀಕೃತವಾದ ಜಮೀನುಗಳನ್ನು ಮತ್ತು ಗ್ರಾಮ ನಕಾಶೆಯಲ್ಲಿ ರಸ್ತೆ, ಬೀದಿ, ಬಂಡಿದಾರಿ, ಓಣಿ ಅಥವಾ ಹಾದಿ ಎಂದು ನಮೂದಾಗಿರುವ ಜಮೀನುಗಳನ್ನು ಸ್ಮಶಾನದ ಉದ್ದೇಶಕ್ಕಾಗಿ ಮೀಸಲಿಡುವಂತಿಲ್ಲ.

4. ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 94ಎ, 94ಬಿ ಮತತ್ಉ 94ಎ(4) ರಡಿಯಲ್ಲಿ ಅನುಕ್ರಮವಾಗಿ ಮೂನೆ-53 ಮತ್ತು 57 ರಲ್ಲಿ ಸ್ವೀಕೃತವಾದ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ, ಕರ್ನಾಟಕ ಭೂ ಕಂದಾಯ ನಿಯಮಗಳು 1966ರ ನಿಯಮ 108ಸಿಸಿ ಅಡಿ ನಮೂನೆ-53 ರ ಅನರ್ಹ ಅರ್ಜಿಗಳನ್ನು ತಿರಸ್ಕರಿಸಲು ಮತ್ತು 108ಸಿಸಿಸಿ ರಡಿ ನಮೂನೆ-57 ರ ಅನರ್ಹ ಅರ್ಜಿಗಳನ್ನು ತಿರಸ್ಕರಿಸಲು ಜಿಲ್ಲಾಧಿಕಾರಿಯವರಿಗೆ ಅಧಿಕಾರ ಪ್ರತ್ಯಾಯೋಜಿಸಲಾಗಿದೆ. ಅದರಂತೆ ಅನರ್ಹಗೊಳಿಸಿದ ಅರ್ಜಿಗಳ ಜಮೀನಿನ ಒತ್ತುವರಿಯನ್ನು ತ್ವರಿತಗತಿಯಲ್ಲಿ

ತೆರವುಗೊಳಿಸಿ ಸೂಕ್ತವಾದ ಸರ್ಕಾರಿ ಜಮೀನನ್ನು ಸ್ಮಶಾನ ಉದ್ದೇಶಕ್ಕೆ ಕಾಯ್ದಿರಿಸಲು ಕ್ರಮ ಕೈಗೊಳ್ಳತಕ್ಕದ್ದು.

ಸರ್ಕಾರದ ಆದೇಶ ಸಂಖ್ಯೆ ಕಂಇ54 ಭೂಸ್ವಾಳ 2014 ದಿನಾಂಕ 31.05.2016 ರಲ್ಲಿ ವಸತಿ. ಸ್ಮಶಾನ, ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಹಾಗೂ ಇನ್ನಿತರೆ ಸಾರ್ವಜನಿಕ ಉಪಯುಕ್ತತೆಯುಳ್ಳ ಸರ್ಕಾರದ ಯೋಜನೆಗಳಿಗೆ ಗರಿಷ್ಠ 100 ಎಕರೆ ಮೀರದಂತೆ ಭೂಕೋರಿಕೆ ಇಲಾಖೆ/ ಫಲಾನುಭವಿ ಸಂಸ್ಥೆಗಳು ಖಾಸಗಿ ಜಮೀನನ್ನು ಭೂಮಾಲೀಕರಿಂದ ಮಾನದಂಡ/ಮಾರ್ಗಸೂಚಿಗಳನ್ನು ಅನುಸರಿಸಿ ನೇರವಾಗಿ ಖರೀದಿಸಲು ಅವಕಾಶ ನೀಡಲಾಗಿದೆ.

ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು ಒತ್ತುವರಿಯಾಗಿರುವ ಸ್ಮಶಾನ ಜಮೀನುಗಳನ್ನು ಗುರುತಿಸಿ ಒತ್ತುವರಿಯಾಗಿರುವ ಜಮೀನುಗಳನ್ನು ತೆರವುಗೊಳಿಸಿ ಸ್ಥಳೀಯ ಸಂಸ್ಥೆಯ ಸುಪರ್ದಿಗೆ ಹಸ್ತಾಂತರಿಸಲು ಕ್ರಮವಹಿಸುವಂತೆ ಈಗಾಗಲೇ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಹಲವು ಬಾರಿ ನಿರ್ದೇಶನವನ್ನು ನೀಡಲಾಗಿದೆ.

ಸಂಖ್ಯೆ: ಆರ್.ಡಿ. 120 ಎಲ್‌ಜಿಕ್ಯೂ 2026

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು